## ಕರ್ನಾಟಕ ಸರ್ಕಾರದ ನಡವಳಿಗಳು.

**ವಿಷಯ:** ಶ್ರೀ ಜಿ.ಎಲ್. ವಿಠಲ್, ಹಿಂದಿನ ಪ್ರಭಾರ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು ಮತ್ತು ಇತರರ ವಿರುದ್ಧದ ಜಂಟಿ ಇಲಾಖಾ ವಿಚಾರಣೆ ಜರುಗಿಸಲು ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಯನ್ನು ನೇಮಿಸುವ ಕುರಿತು ಆದೇಶ

**ಓದಲಾಗಿದೆ:**
1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು ಇವರ ಪತ್ರ ಸಂಖ್ಯೆ: ಜಿಪಂಚಿ/ಆ-1/ಸಿಸಿಎ/ಎಫ್ಎಂಎಸ್.4948/2014-15/ ದಿ.16-09-2014-
2. ಸರ್ಕಾರದ ಕಾರಣ ಕೇಳುವ ನೋಟೀಸ ಸಂಖ್ಯೇ: ಗ್ರಾಅಪ/169/ವಿಸೇಜಿ/2014 ದಿನಾಂಕ: 06-03-2015-
3. ಆಪಾದಿತರು ಸಲ್ಲಿಸಿರುವ ಲಿಖಿತ ಹೇಳಿಕೆಗಳು.

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಪತ್ರದಲ್ಲಿ ಚಿಕ್ಕಮಗಳೂರು, ಜಿಲ್ಲಾ ಪಂಚಾಯತಿಯಲ್ಲಿ 2013-14ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ 3054 ರಿಂದ ಲೆಕ್ಕ ಶೀರ್ಷಿಕೆ 5054 ಕ್ಕೆ ಅನುದಾನ ಮಾರ್ಗಪಲ್ಲಟ ಮಾಡಿರುವ ಕುರಿತು ದಿನಾಂಕ:13-08-2014 ರಲ್ಲಿ ಮುಖ್ಯ ಲೆಕ್ಕಾಧಿಕಾರಿಗಳು ತಪಾಸಣೆ ನಡೆಸಿದ್ದು, ಜಿಲ್ಲಾ ಪಂಚಾಯತಿ ಕೇಂದ್ರ ಕಛೇರಿಯಿಂದ ಜಿಲ್ಲಾ ಪಂಚಾಯತಿ ಕಾರ್ಯಪಾಲಕ ಅಭಿಯಂತರರ ಕಛೇರಿಗೆ ನಿಯಮಬಾಹಿರವಾಗಿ ಅನುದಾನ ಮಾರ್ಗಪಲ್ಲಟ ಮಾಡಲು ಅನುಮತಿ ನೀಡಿರುವ ಹಾಗೂ 2012-13 ನೇ ಸಾಲಿನಲ್ಲಿ ಮಾರ್ಚ ಅಂತ್ಯಕ್ಕೆ ಖರ್ಚಾಗದೇ ಉಳಿದ ಅನುದಾನವನ್ನು ವಿವಿಧ ಲೆಕ್ಕ ಶೀರ್ಷಿಕೆಗಳಿಂದ ಒಟ್ಟು ರೂ. 12,40,62,400/- ಗಳು ಉಳಿದಿದ್ದು, ಅದನ್ನು ಸ್ವೀಕರ್ತನ ರಸೀದಿ ಮೂಲಕ ಡ್ರಾ ಮಾಡಿ ಪಿಡಿ ಖಾತೆಯಲ್ಲಿ ಇಟ್ಟಿದ್ದು, ಸರ್ಕಾರದ ಅನುದಾನ ದುರುಪಯೋಗ ಮಾಡಿರುವುದಲ್ಲದೆ, ನಿಯಮಬಾಹಿರವಾಗಿ ಕಾರ್ಯನಿರ್ವಹಿಸಿ, ಕರ್ತವ್ಯಲೋಪ/ದುರ್ನಡತೆ ಎಸಗಿರುವ ಅರೋಪಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು ರವರು ದಿನಾಂಕ:16-09-2014 ರಲ್ಲಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

1) ಶ್ರೀ ಜಿ. ಎಲ್. ವಿಠಲ್, ಹಿಂದಿನ ಪ್ರಭಾರ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು.
2) ಶ್ರೀ ಟಿ ಮಾದಯ್ಯ , ಹಿಂದಿನ ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯ್ತಿ, ಚಿಕ್ಕಮಗಳೂರು.
3) ಶ್ರೀ ಹೆಚ್. ಎಂ. ರುದ್ರಪ್ಪ, ಹಿಂದಿನ ಮುಖ್ಯ ಲೆಕ್ಕಾಧಿಕಾರಿ,(ಪ್ರ) ಜಿಲ್ಲಾ ಪಂಚಾಯ್ತಿ, ಚಿಕ್ಕಮಗಳೂರು.(ನಿ)
4) ಶ್ರೀ ಎಂ.ಡಿ.ಮುದ್ದುಕೃಷ್ಣಮೂರ್ತಿ, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚಿಕ್ಕಮಗಳೂರು.
5) ಶ್ರೀ ಹೆಚ್. ನಾಗರಾಜ್ ನಾಯಕ್, ಹಿಂದಿನ (ಪ್ರ) ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚಿಕ್ಕಮಗಳೂರು.
6) ಶ್ರೀ ಟಿ. ವೆಂಕಟಾಚಲಯ್ಯ, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚಿಕ್ಕಮಗಳೂರು.
7) ಶ್ರೀ ಹೆಚ್. ಎಸ್. ರಾಮನಾಥ್, ಹಿಂದಿನ ಲೆಕ್ಕಾಧಿಕಾರಿ-1, ಜಿಲ್ಲಾ ಪಂಚಾಯ್ತಿ, ಚಿಕ್ಕಮಗಳೂರು.
8) ಶ್ರೀ ವಿ.ಎಸ್. ಪ್ರಸಾದ್, ಹಿಂದಿನ ಲೆಕ್ಕ ಪರಿಶೋಧನಾಧಿಕಾರಿ, ಜಿಲ್ಲಾ ಪಂಚಾಯ್ತಿ, ಚಿಕ್ಕಮಗಳೂರು.

ಪ್ರಸ್ತಾವನೆಯನ್ನು ಪರಿಶೀಲಿಸಿ ಪ್ರಕರಣದಲ್ಲಿ ಭಾಗಿಯಾಗಿರುವರೆನ್ನಲಾದ ಮೇಲ್ಕಂಡ ಅಧಿಕಾರಿ/ನೌಕರರುಗಳಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 11 ರಡಿ ಮತ್ತು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿ 1958 ರ ನಿಯಮ 214 ರಡಿಯಲ್ಲಿ ಶಿಸ್ತು ಕ್ರಮ ಜರುಗಿಸಲು ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಕಾರಣ ಕೇಳುವ ನೋಟೀಸಿನೊಂದಿಗೆ ದೋಷಾರೋಪಣಾ ಪಟ್ಟಿಯನ್ನು (ಅನುಬಂಧ 1 ರಿಂದ 4 ನ್ನು) ಜಾರಿ ಮಾಡಲಾಗಿತ್ತು. ಸದರಿ ನೋಟೀಸಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಆರೋಪಿತ ಅಧಿಕಾರಿಗಳು ಲಿಖಿತ ರಕ್ಷಣಾ ಹೇಳಿಕೆಗಳನ್ನು ಸಲ್ಲಿಸಿ ತಮ್ಮ ವಿರುದ್ಧದ ಆರೋಪಗಳನ್ನು ನಿರಾಕರಿಸಿರುತ್ತಾರೆ. ಅವರುಗಳ ಲಿಖಿತ ಹೇಳಿಕೆಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿದ್ದು, ಅಪಾದಿತರ ಲಿಖಿತ ಹೇಳಿಕೆಗಳನ್ನು ಒಪ್ಪಲು ಸಮರ್ಥನೀಯವಾದ ಅಂಶಗಳು ಕಂಡು ಬಾರದಿರುವುದರಿಂದ ಅವರುಗಳ ವಿರುದ್ಧದ ಆರೋಪಗಳ ಕುರಿತಂತೆ ಸತ್ಯಾಸತ್ಯತೆಯನ್ನು ತಿಳಿಯಲು ವಿವರವಾದ ಜಂಟಿ ಇಲಾಖಾ ವಿಚಾರಣೆ ನಡೆಸಲು ಸರ್ಕಾರವು ನಿರ್ಧರಿಸಿ ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 169 ವಿಸೇಜಿ 2014 ಬೆಂಗಳೂರು ದಿನಾಂಕ:09-06-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡ ಅಧಿಕಾರಿ/ನೌಕರರುಗಳಾದ:-.

1) ಶ್ರೀ ಜಿ. ಎಲ್. ವಿಠಲ್, ಹಿಂದಿನ ಪ್ರಭಾರ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು.
2) ಶ್ರೀ ಟಿ ಮಾದಯ್ಯ , ಹಿಂದಿನ ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯ್ತಿ, ಚಿಕ್ಕಮಗಳೂರು.(ನಿ)
3) ಶ್ರೀ ಹೆಚ್. ಎಂ. ರುದ್ರಪ್ಪ, ಹಿಂದಿನ ಮುಖ್ಯ ಲೆಕ್ಕಾಧಿಕಾರಿ.(ಪ್ರ) ಜಿಲ್ಲಾ ಪಂಚಾಯ್ತಿ, ಚಿಕ್ಕಮಗಳೂರು.
4) ಶ್ರೀ ಎಂ.ಡಿ. ಮುದ್ದುಕೃಷ್ಣಮೂರ್ತಿ, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚಿಕ್ಕಮಗಳೂರು.
5) ಶ್ರೀ. ಹೆಚ್. ನಾಗರಾಜ್ ನಾಯಕ್, ಹಿಂದಿನ (ಪ್ರ) ಕಾರ್ಯಪಾಲಕ ಇಂಜಿನಿಯರ್. ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚಿಕ್ಕಮಗಳೂರು.
6) ಶ್ರೀ ಟಿ. ವೆಂಕಟಾಚಲಯ್ಯ, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚಿಕ್ಕಮಗಳೂರು.
7) ಶ್ರೀ ಹೆಚ್. ಎಸ್. ರಾಮನಾಥ್, ಹಿಂದಿನ ಲೆಕ್ಕಾಧಿಕಾರಿ-1, ಜಿಲ್ಲಾ ಪಂಚಾಯ್ತಿ, ಚಿಕ್ಕಮಗಳೂರು.
8) ಶ್ರೀ ವಿ.ಎಸ್. ಪ್ರಸಾದ್, ಹಿಂದಿನ ಲೆಕ್ಕ ಪರಿಶೋಧನಾಧಿಕಾರಿ, ಜಿಲ್ಲಾ ಪಂಚಾಯ್ತಿ, ಚಿಕ್ಕಮಗಳೂರು.

ಇವರುಗಳ ವಿರುದ್ಧ ಮಾಡಿರುವ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆ ನಡೆಸಲು ಕ್ರ. ಸಂ: (2) ರ ಅಧಿಕಾರಿ ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿ 1958 ರ ನಿಯಮ 214 ರಡಿಯಲ್ಲಿ ಪ್ರದತ್ತವಾದ ಅಧಿಕಾರದಂತೆ ಮತ್ತು ಉಳಿದ ಅಧಿಕಾರಿಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11 ರ ಪ್ರಕಾರ ಇಲಾಖಾ ವಿಚಾರಣೆಯನ್ನು ನಡೆಸಲು, ಸದರಿ ನಿಯಮಾವಳಿಗಳ ನಿಯಮ 13 ರಡಿಯಲ್ಲಿ ಜಂಟಿ ಇಲಾಖಾ ವಿಚಾರಣೆಗೆ ಆದೇಶಿಸಿದೆ.

ಈ ಜಂಟಿ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11 ರ ಪ್ರಕಾರ ಅದೇ ನಿಯಮಾವಳಿಗಳ ನಿಯಮ 11(2) ರ ಪ್ರಕಾರ ಶ್ರೀ ಎಂ. ಎಸ್. ಹೆಗಡೆ ನಾಗ್ರೆ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿದೆ.

ಶಿಸ್ತು ಪ್ರಾಧಿಕಾರಿಯ ಪರವಾಗಿ ಪ್ರಕರಣವನ್ನು ವಿಚಾರಣಾಧಿಕಾರಿಯವರ ಮುಂದೆ ಮಂಡಿಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ

ನಿಯಮ 11(5)(ಸಿ) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸಹಾಯಕ ಕಾರ್ಯದರ್ಶಿ ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು ಇವರನ್ನು ಮಂಡನಾಧಿಕಾರಿಯಾಗಿ ನೇಮಿಸಿದೆ.

ವಿಚಾರಣಾಧಿಕಾರಿಯವರು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11 ರಲ್ಲಿ ನಿಗದಿ ಪಡಿಸಿರುವ ಕಾರ್ಯವಿಧಾನದ ಪ್ರಕಾರ ಇಲಾಖಾ ವಿಚಾರಣೆ ಜರುಗಿಸಿ ಪ್ರತಿಯೊಂದು ಆರೋಪವು ಸಾಬೀತಾಗಿರುವ ಅಥವಾ ಸಾಬೀತಾಗಿಲ್ಲದಿರುವ ಬಗ್ಗೆ ತಮ್ಮ ಸ್ಪಷ್ಟ ಅಭಿಪ್ರಾಯದೊಂದಿಗೆ ವಿಚಾರಣಾ ವರದಿಯನ್ನು 3 ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳಿಗೆ ಸೂಕ್ತ ಸ್ಥಳಾವಕಾಶ, ಶೀಘ್ರಲಿಪಿಗಾರರ ಸೇವೆ ಹಾಗೂ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು(ಗ್ರಾ) ಇವರು ಕ್ರಮ ಕೈಗೊಳ್ಳತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ/45/ಸೇಇವಿ/2014 ದಿನಾಂಕ:08-01-2015 ರನ್ವಯ ವಾಹನ ಭತ್ಯೆಯೂ ಸೇರಿದಂತೆ ಒಟ್ಟು ರೂ. 25,000/- ಗಳ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ. ಹನುಮಂತಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ.ಬಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು,(ಎ & ಇ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ, ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
4. ನಿರ್ದೇಶಕರು, ರಾಜ್ಯ ಲೆಕ್ಕ ಪತ್ರ ಇಲಾಖೆ, ಕಾವೇರಿ ಭವನ, ಬೆಂಗಳೂರು-9.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು/ಬೆಂಗಳೂರು(ಗ್ರಾ)
6. ಶ್ರೀ ಎಂ. ಎಸ್. ಹೆಗ್ಡೆ ನಾಗ್ಲೆ, ನಿವೃತ್ತ ನ್ಯಾಯಾಧೀಶರು, ಟಿ.ಎಫ್-4, ಸೂರ್ಯ ಕ್ಲಾಸಿಕ್, 4ನೇ ಮೇನ್, ರಾಮಮಂದಿರ ಬೀದಿ ಹತ್ತಿರ, ಯಲಚೇನಹಳ್ಳಿ ಬಸ್ ನಿಲ್ದಾಣ, ಕನಕಪುರ ರಸ್ತೆ, ಜೆ.ಪಿ. ನಗರ ಅಂಚೆ, ಬೆಂಗಳೂರು-78, (ಮೊ.ನಂ. 9449747187).
7. ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ.ಬಿ.&ಸಿ) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ, ಇಲಾಖೆ, ವಿಕಾಸ ಸೌಧ, ಬೆಂಗಳೂರು
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಆಡಳಿತ ಮತ್ತು ಮುಂಗಡ) ವಿಧಾನ ಸೌಧ, ಬೆಂಗಳೂರು.
9. ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು ( ಮಂಡನಾಧಿಕಾರಿ).
10. ಆಪಾದಿತ ಅಧಿಕಾರಿಗಳಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು ಇವರ ಮುಖಾಂತರ)
11. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ(ಪಂ.ರಾಜ್)/ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾ .ಅ. & ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
12. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
13. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

GO